# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರೇಷ್ಮೆ ಗೂಡು / ಕಚ್ಚಾ ರೇಷ್ಮೆಯ ಉತ್ಪಾದನೆ ಧಾರಣೆ ಹಾಗೂ ಮಾರಾಟ ವ್ಯವಸ್ಥೆಯ ಸಮಗ್ರ ಅಧ್ಯಯನಕ್ಕಾಗಿ ತಾಂತ್ರಿಕ ಸಮಿತಿ ರಚನೆ ಬಗ್ಗೆ.

* * * * *

**ಓದಲಾಗಿದೆ:** ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:23-06-2015 ರಂದು ನಡೆದ ಸಭೆ

**ಪ್ರಸ್ತಾವನೆ:**

ರಾಜ್ಯವು ರೇಷ್ಮೆ ಉತ್ಪಾದನೆಯಲ್ಲಿ ರಾಷ್ಟ್ರದಲ್ಲಿ ಪ್ರಮುಖ ಸ್ಥಾನದಲ್ಲಿದೆ. ರೇಷ್ಮೆ ಗೂಡು ಉತ್ಪಾದನೆ ಮತ್ತು ಕಚ್ಚಾ ರೇಷ್ಮೆ ನೂಲು ಉತ್ಪಾದನೆಯಲ್ಲಿ ರಾಜ್ಯದ ರೇಷ್ಮೆ ರೈತರು ಮತ್ತು ನೂಲು ಬಿಚ್ಚಾಣಿಕೆದಾರರು ವಿಶೇಷ ಪರಿಣಿತಿ ಹೊಂದಿರುತ್ತಾರೆ. ದಿನವಹಿ ಪ್ರಮುಖ ರೇಷ್ಮೆ ಗೂಡಿನ ಮಾರುಕಟ್ಟೆಗಳಲ್ಲಿ ಸರಾಸರಿ 150 ಮೆಟ್ರಿಕ್ ಟನ್ ಗೂಡಿನ ಆವಕವಿದ್ದು ಪೂರ್ಣ ಪ್ರಮಾಣದಲ್ಲಿ ವಹಿವಾಟು ನಡೆಯುತ್ತಿದೆ. ಇತ್ತೀಚಿನ ದಿನಗಳಲ್ಲಿ ರೇಷ್ಮೆ ಗೂಡಿನ ದರ, ಕಚ್ಚಾ ರೇಷ್ಮೆ ದರಗಳಲ್ಲಿ ಇಳಿಮುಖವಾಗಿರುತ್ತದೆ. ಇದರಿಂದ ರೇಷ್ಮೆ ಬೆಳೆಗಾರರು ಆತಂಕಗೊಂಡಿದ್ದು, ರೇಷ್ಮೆ ಗೂಡಿನ ದರ ಕುರಿತಾಗಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪ್ರತಿಭಟನೆಯನ್ನು ಕೈಗೊಂಡಿರುತ್ತಾರೆ. ಅದೇ ರೀತಿ ರೀಲರುಗಳೂ ಸಹ ಅತಂಕಕ್ಕೆ ಒಳಗಾಗಿರುತ್ತಾರೆ.

ಈ ಹಿನ್ನಲೆಯಲ್ಲಿ ದಿನಾಂಕ 23-06-2015 ರಂದು ವಿಕಾಸಸೌಧದ ಸಮ್ಮೇಳನ ಸಭಾಂಗಣದಲ್ಲಿ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಾಂಪ್ರದಾಯಿಕ ರೇಷ್ಮೆ ಜಿಲ್ಲೆಗಳಾದ ರಾಮನಗರ, ತುಮಕೂರು, ಬೆಂಗಳೂರು ಗ್ರಾಮಾಂತರ, ಮೈಸೂರು, ಮಂಡ್ಯ, ಚಾಮರಾಜನಗರ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಜಿಲ್ಲಾ ಉಸ್ತುವಾರಿ ಸಚಿವರು, ಮಾನ್ಯ ಸಂಸದರು, ಮಾನ್ಯ ಶಾಸಕರು, ವಿಧಾನ ಪರಿಷತ್ ಸದಸ್ಯರು, ರೇಷ್ಮೆ ಬೆಳೆಗಾರರು, ರೇಷ್ಮೆ ಬೆಳೆಗಾರರ ಸಂಘಟನೆಗಳ ಪ್ರತಿನಿಧಿಗಳು ಮತ್ತು ನೂಲು ಬಿಚ್ಚಾಣಿಕೆದಾರರು, ರೇಷ್ಮೆ ನೂಲು ಬಿಚ್ಚಾಣಿಕೆ ಸಂಘಟನೆಗಳ ಪ್ರತಿನಿಧಿಗಳು ಮತ್ತು ಚಾಕಿ ಸಾಕಾಣಿಕ ಕೇಂದ್ರಗಳ ಹಾಗೂ ಇತರೇ ರೇಷ್ಮೆ ಭಾಗೀದಾರರ ಪ್ರತಿನಿಧಿಗಳನ್ನೊಳಗೊಂಡಂತೆ ಸಭೆಯನ್ನು ಏರ್ಪಡಿಸಲಾಯಿತು.

ಇತ್ತೀಚಿನ ದಿನಗಳಲ್ಲಿ ರೇಷ್ಮೆ ಗೂಡು ಮತ್ತು ಕಚ್ಚಾ ರೇಷ್ಮೆಯ ಧಾರಣೆಯಲ್ಲಿ ಕುಸಿತ ಕಂಡು ಬಂದಿರುವ ಕುರಿತು ರೇಷ್ಮೆ ಬೆಳೆಗಾರರು, ರೇಷ್ಮೆ ನೂಲು ಬಿಚ್ಚಾಣಿಕೆದಾರರು, ಮಾನ್ಯ ಸಂಸದರು, ಮಾನ್ಯ ಶಾಸಕರುಗಳು ಹಾಗೂ ಇತರೆ ರೇಷ್ಮ ಭಾಗೀದಾರರು ಸಭೆಯಲ್ಲಿ ಭಾಗವಹಿಸಿ ತಮ್ಮ ಅಭಿಪ್ರಾಯ ಮತ್ತು ಸಲಹೆಗಳನ್ನು ನೀಡಿರುತ್ತಾರೆ. ಸಭೆಯಲ್ಲಿ ವ್ಯಕ್ತಪಡಿಸಿದ ಅಭಿಪ್ರಾಯಗಳನ್ನು ಪರಿಗಣಿಸಿ ರೇಷ್ಮೆ ಗೂಡು / ಕಚ್ಚಾ ರೇಷ್ಮೆ ಉತ್ಪಾದನೆ ಹಾಗೂ ಮಾರಾಟದ ವ್ಯವಸ್ಥೆ ಒಳಗೊಂಡಂತೆ ಸಮಗ್ರ ಅಧ್ಯಯನಕ್ಕಾಗಿ ಹಾಗೂ ಚಾಕಿ ವೆಚ್ಚ, ಅಲ್ಲದೆ ರೇಷ್ಮೆ ಬೆಳೆಗಾರರು ಮತ್ತು ರೀಲರ್‌ಗಳಿಗೆ ಸಂಬಂಧಿಸಿದ ಇತರೆ ವಿಷಯಗಳ ಪರಿಶೀಲನೆಗಾಗಿ ತಾಂತ್ರಿಕ ಸಮಿತಿ ರಚನೆಯನ್ನು ಮಾಡಲು ಮಾನ್ಯ ಮುಖ್ಯಮಂತ್ರಿಗಳು ಸೂಚಿಸಿರುತ್ತಾರೆ.

ಆದ್ದರಿಂದ, ಡಾ॥ ಬಸವರಾಜ ಹೆಚ್., ಪ್ರಾಧ್ಯಾಪಕರು ಕೃಷಿ ಅರ್ಥಶಾಸ್ತ್ರ, ಕೃಷಿ ವಿಶ್ವವಿದ್ಯಾಲಯ, ಧಾರವಾಡ ಇವರ ಅಧ್ಯಕ್ಷತೆಯಲ್ಲಿ ರೇಷ್ಮೆ ಗೂಡು / ಕಚ್ಚಾ ರೇಷ್ಮೆ ಉತ್ಪಾದನೆ ಹಾಗೂ ಮಾರಾಟ ವ್ಯವಸ್ಥೆ ಧಾರಣೆ ಒಳಗೊಂಡಂತೆ ಅಧ್ಯಯನ ಹಾಗೂ ರೇಷ್ಮೆ ರೈತರು / ರೈತ ಸಂಘಟನೆಗಳು, ರೀಲರ್‌ಗಳು, ರೀಲರ್ ಸಂಘಟನೆಗಳ ಮತ್ತು ಇತರೆ ರೇಷ್ಮೆ ಭಾಗೀಧಾರರ ಬೇಡಿಕೆ, ಚಾಕಿ ಸಾಕಾಣಿಕಾ ವೆಚ್ಚ ಮತ್ತು ಸಂಬಂಧಿಸಿದ ಇತರೆ ವಿಷಯಗಳನ್ನು ಪರಿಶೀಲಿಸಲು ಒಂದು ತಾಂತ್ರಿಕ ಸಮಿತಿಯನ್ನು ರಚಿಸಲು ಸರ್ಕಾರವು ನಿರ್ಧರಿಸಿರುವ ಕಾರಣ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ತೋಇ 138 ರೇಕೃವಿ 2015**

**ಬೆಂಗಳೂರು, ದಿನಾಂಕ: 25-06-2015**

1. ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ರೇಷ್ಮೆ ಗೂಡು / ಕಚ್ಚಾ ರೇಷ್ಮೆ ಉತ್ಪಾದನೆ ಹಾಗೂ ಮಾರಾಟ ವ್ಯವಸ್ಥೆ ಧಾರಣೆ ಒಳಗೊಂಡಂತೆ ಅಧ್ಯಯನ ಹಾಗೂ ರೇಷ್ಮೆ ರೈತರು / ರೈತ

ಪು.ತಿ.ನೋ. . . . .